ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಅನುಪಾತ ಅನುಸರಿಸುತ್ತಿಲ್ಲ.

ಆ) ವಿಷಯಗಳಿಗೆ ಅನುಸಾರವಾಗಿ ಉಪನ್ಯಾಸಕರನ್ನು ನೇಮಕ ಮಾಡುವುದು ಈ ಹಂತದಲ್ಲಿ ಅವಶ್ಯವಾದ ಕಾರಣ ಅನುಪಾತವನ್ನು ಅನುಸರಿಸಲು ಸಾಧ್ಯವಿಲ್ಲ.

ಇ) ಪದವಿಪೂರ್ವ ಕಾಲೇಜು:

ಖಾಲಿ ಹುದ್ದೆಗಳು - 864

ನೇಮಕಾತಿ ಕ್ರಮ:- ಕೆಪಿಎಸ್‌ಸಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಂಡಿದೆ.

ಪ್ರೌಢ ಶಾಲೆ:

ಸಹಶಿಕ್ಷಕರ ಹುದ್ದೆ	-	2608
ಗ್ರೇಡ್-1 ದೈ.ಶಿ	-	267
ಗ್ರೇಡ್-2 ದೈ.ಶಿ	-	76
ವೃತ್ತಿ ಶಿಕ್ಷಕರು	-	1121
ಒಟ್ಟು	-	**4072**

ನೇಮಕಾತಿ ಕ್ರಮ:- ಸಹ ಶಿಕ್ಷಕರ ಹುದ್ದೆಯಲ್ಲಿ ಖಾಲಿಯಿರುವ 2608 ಹುದ್ದೆಗಳ ಪೈಕಿ 1893 ಹುದ್ದೆಗಳನ್ನು ಮಾದರಿ ಪ್ರಾಥಮಿಕ ಪಾಠಶಾಲೆಗಳ ಮುಖ್ಯೋಪಾಧ್ಯಾಯರನ್ನು ಹಾಗೂ ಶಾಲಾ ತನಿಖಾಧಿಕಾರಿಗಳನ್ನು ಪ್ರೌಢ ಶಾಲೆಗಳಿಗೆ ಹಿಂದೆ ಪಡೆದು ಭರ್ತಿ ಮಾಡಲಾಗುತ್ತಿದೆ. ಉಳಿದ ಸಹಶಿಕ್ಷಕರನ್ನು ದ.ಶಿ ರನ್ನು ಹಾಗೂ ವೃತ್ತಿ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಲಾಗಿದೆ.

ಈ) ಅದಷ್ಟು ಬೇಗನೆ ಈ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇಂಡಿ ಮತ ಕ್ಷೇತ್ರದಲ್ಲಿರುವ ಆಸ್ಪತ್ರೆಗಳಿಗೆ ಔಷಧಿ ಪೂರೈಕೆ.

394 - ಶ್ರೀ ರವಿಕಾಂತ ಎಸ್. ಪಾಟೀಲ್ (ಇಂಡಿ), ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಕರ್ತವ್ಯ ಮಾಡುತ್ತಿರುವ ಡಾಕ್ಟರ್ ಹಾಗೂ ಅದರ ಸಿಬ್ಬಂದಿ ಸಂಖ್ಯೆ ಎಷ್ಟು?

ಆ) ಮೇಲ್ಕಂಡ ಆಸ್ಪತ್ರೆಯ ವೈದ್ಯರುಗಳು ಗೈರು ಹಾಜರಿಯಾಗಿ ಖಾಸಗೀ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದವರು ತೆಗೆದುಕೊಳ್ಳುವ ಕ್ರಮವೇನು?

ಇ) ಇಂಡಿ ಮತ ಕ್ಷೇತ್ರದಲ್ಲಿ ಔಷಧಿಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದಲ್ಲಿ ಔಷಧಿ ಪೂರೈಸಲು ಸರ್ಕಾರದವರು ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ವೈದ್ಯರು - 13
ಸಿಬ್ಬಂದಿ - 69

ಆ) ಇಲ್ಲ.

ಇ) ಔಷಧಿಗಳನ್ನು ಪೂರೈಕೆ ಮಾಡಲಾಗುತ್ತದೆ.

ಇಡಗೂರು ಗ್ರಾಮದ ಸರ್ಕಾರಿ ಪ್ರೌಡಶಾಲೆ ಕಟ್ಟಡ

395 - ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕಿನ ಸಿ.ಎಸ್. ಪುರ ಹೋಬಳಿಯ ಇಡಗೂರು ಗ್ರಾಮದಲ್ಲಿ 1983-84ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ ಮಂಜೂರಾಗಿದ್ದು ಕಟ್ಟಡವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮವೇನು.

ಇ) 1995-96ನೇ ಸಾಲಿನ ಆಯವ್ಯಯದಲ್ಲಿ ಈ ಶಾಲಾ ಕಟ್ಟಡದ ನಿರ್ಮಾಣಕ್ಕೆ ಹಣ ಒದಗಿಸಲಾಗಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಜಮೀನನ್ನು ಶಾಲೆಗೆ ಮಂಜೂರು ಮಾಡುವ ಪ್ರಕ್ರಿಯೆ ಜಿಲ್ಲಾಧಿಕಾರಿಗಳು, ತುಮಕೂರು ಇವರ ಹಂತದಲ್ಲಿ ನಡೆಯುತ್ತಿದೆ.

ಇ) ಶಾಲಾ ಕಟ್ಟಡ ನಿರ್ಮಾಣವನ್ನು 1995-96ನೇ ಸಾಲಿನ ಕ್ರಿಯಾ ಯೋಜನೆಯಡಿ ಸೇರಿಸಿ ನಿರ್ಮಾಣ ಕಾರ್ಯಕೈಗೊಳ್ಳಲು ಜಿಲ್ಲಾ ಪಂಚಾಯತ್ ಕಛೇರಿಗೆ ಕೋರಲಾಗಿದೆ.

URDU & MARATHI TEACHERS POSTS IN BELAGAM DISTRICT.

396 - Sri. B.I. Patil (Belagam) : Will the Minister for Primary and Secondary Education be pleased to State?